ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**:ARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

15

ಾಖೆ / ವಿಷಯ : DEPARTMENT / SUBJECT: ಸಾರ್ವಜನಿಕ ಲೆಕ್ಕಪತ್ರ ಸಮಿತಿ

ಕೆಯ ಹೆಸರು : NAME OF THE NEWS PAPER: ವಿಜಯಕರ್ನಾಟಕ   ದಿನಾಂಕ : DATE : 26/9/20

# ರೇಸ್‌ಕೋರ್ಸ್ ಸ್ಥಳಾಂತರಕ್ಕೆ ಪಿಎಸಿ ವರದಿ

**ಬೆಂಗಳೂರು:** ಬೆಂಗಳೂರು ಟರ್ಫ್ ಕ್ಲಬ್ ಸ್ಥಳಾಂತರಕ್ಕೆ ಶೀಘ್ರ ಕ್ರಮ ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಎದುರಾಗಿರುವ ಅಡೆತಡೆ ನಿವಾರಣೆಗೆ ಕಾನೂನು ಹೋರಾಟ ಚುರುಕುಗೊಳಿಸಬೇಕು ಎಂದು ಮಾಜಿ ಸಚಿವ ಎಚ್.ಕೆ.ಪಾಟೀಲ್ ಅಧ್ಯಕ್ಷತೆಯ ಸಾರ್ವಜನಿಕ ಲೆಕ್ಕಪತ್ರ ಸಮಿತಿ(ಪಿಎಸಿ) ವರದಿ ಸಲ್ಲಿಸಿದೆ.

ಸಮಿತಿ ಈ ಕುರಿತು ನೀಡಿರುವ ವರದಿಯನ್ನು ವಿಧಾನಸಭೆಯಲ್ಲಿ ಶುಕ್ರವಾರ ಮಂಡಿಸಲಾಯಿತು. ಟರ್ಫ್ ಕ್ಲಬ್ ಸ್ಥಳಾಂತರ ತಡೆ ಕೋರಿ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿದೆ. ಇದು ಸಲ್ಲಿಕೆಯಾಗಿ 9 ತಿಂಗಳು ಕಳೆದಿದ್ದರೂ ವಿಚಾರಣೆ ನಡೆದಿಲ್ಲ. ಹಾಗಾಗಿ ತ್ವರಿತ ವಿಚಾರಣೆಗೆ ಅಡ್ವೊಕೇಟ್ ಜನರಲ್ ಹಾಗೂ ಕಾನೂನು ತಜ್ಞರೊಂದಿಗೆ ಸಮಾಲೋಚಿಸಿ ಅಗತ್ಯವಿರುವ ಎಲ್ಲ ಕ್ರಮ ಕೈಗೊಳ್ಳಬೇಕು ಎಂದು ಸಮಿತಿ ಶಿಫಾರಸು ಮಾಡಿದೆ.

ಟರ್ಫ್ ಕ್ಲಬ್‌ನಿಂದ 36.63 ಕೋಟಿ ರೂ. ಬಾಕಿ ಇದ್ದು, ಬಡ್ಡಿ ಸಮೇತ ವಸೂಲಿ ಮಾಡಿ ಲೈಸೆನ್ಸ್ ರದ್ದುಪಡಿಸಬೇಕು. ಈ ಜಾಗದಲ್ಲಿ ಲಾಲ್‌ಬಾಗ್, ಕಬ್ಬನ್ ಪಾರ್ಕ್ ಮಾದರಿ ಉದ್ಯಾನ ನಿರ್ಮಿಸಬಹುದು ಎಂದು ಶಿಫಾರಸು ಮಾಡಲಾಗಿದೆ.